ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 20 [illegible]

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ          ದಿನಾಂಕ : DATE : 16/2/202

# ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಪದವಿ ಕಾಲೇಜು ನಿರ್ಮಾಣ

ಉದಯ 16/2/21

## ತಿಂಗಳಲ್ಲಿ ಉತ್ತರ ವಿವಿಗೆ 170 ಎಕರೆ ಹಸ್ತಾಂತರ



ಉನ್ನತ ಶಿಕ್ಷಣ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಉಪ ಮುಖ್ಯಮಂತ್ರಿ ಡಾ.ಸಿ.ಎನ್. ಅಶ್ವತ್ಥನಾರಾಯಣ ಅವರು ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದರು.

**ಬೆಂಗಳೂರು:** ರಾಜಧಾನಿ ಬೆಂಗಳೂರಿನ ಪ್ರತಿ ವಿಧಾನಸಭೆ ಕ್ಷೇತ್ರದಲ್ಲಿ ಜಾಗತಿಕ ಗುಣಮಟ್ಟದ ಪದವಿ ಕಾಲೇಜು ಸ್ಥಾಪಿಸಲು ತೀರ್ಮಾನಿಸಲಾಗಿದ್ದು ಸೋಮವಾರ ನಡೆದ ಉನ್ನತ ಶಿಕ್ಷಣ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ.

ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಉನ್ನತ ಶಿಕ್ಷಣ ಸಚಿವರೂ ಆದ ಉಪ ಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ, ಗುಣಮಟ್ಟದ ಕಲಿಕೆ, ಬೋಧನೆ ಮತ್ತು ಸಂಶೋಧನೆ ರಾಷ್ಟ್ರೀಯ ಶಿಕ್ಷಣ ನೀತಿಯ ಆಶಯ. ಅದರಂತೆ ಬೆಂಗಳೂರಿನ 28 ವಿಧಾನಸಭೆ ಕ್ಷೇತ್ರಗಳಲ್ಲೂ ಸರ್ಕಾರಿ ಜಾಗ ಗುರುತಿಸಿ ಪದವಿ ಕಾಲೇಜು ಸ್ಥಾಪಿಸಲಾಗುವುದು ಎಂದರು.

ಮೊದಲ ಹಂತದಲ್ಲಿ ಬೆಂಗಳೂರು ನಗರದಲ್ಲಿ ಈ ಯೋಜನೆ ಕಾರ್ಯಗತಗೊಳಿಸಿ ನಂತರ ಇಡೀ ರಾಜ್ಯಕ್ಕೆ ವಿಸ್ತರಿಸಲಾಗುವುದು. ಬೆಂಗಳೂರು ಕೇಂದ್ರ, ಬೆಂಗಳೂರು ಹಾಗೂ ಬೆಂಗಳೂರು ಉತ್ತರ ವಿವಿಗಳ ಮೂಲಕವೇ ವಿಧಾನಸಭೆ ಕ್ಷೇತ್ರವಾರು ಅತ್ಯುತ್ತಮ ಗುಣಮಟ್ಟದ ಪದವಿ ಕಾಲೇಜುಗಳು ಸ್ಥಾಪನೆಯಾಗಲಿವೆ ಎಂದು ತಿಳಿಸಿದರು.

ಬೆಂಗಳೂರು ಬೆಳೆಯುತ್ತಿದ್ದು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಕಾಲೇಜುಗಳ ಸ್ಥಾಪನೆ ಅಗತ್ಯ. ಆರ್ಥಿಕ ಸಂಕಷ್ಟದಲ್ಲಿರುವ ವಿದ್ಯಾರ್ಥಿಗಳಿಗೆ ಉಪಯೋಗವಾಗಲಿದೆ. ಕಾಲೇಜುಗಳ ನಿರ್ಮಾಣಕ್ಕೆ ಅಗತ್ಯ ಜಾಗ ನೀಡುವಂತೆ ಮುಖ್ಯಮಂತ್ರಿಯವರಿಗೆ ಪ್ರಸ್ತಾವನೆ ಸಲ್ಲಿಸಲಾಗುವುದು. ಸಭೆಗೆ ಮುನ್ನ ಬೆಂಗಳೂರು ನಗರ ಜಿಲ್ಲಾಧಿಕಾರಿ ಮಂಜುನಾಥ್ ಅವರ ಜತೆಯೂ ಮಾತುಕತೆ ನಡೆಸಿದ್ದೇನೆ. ಸದ್ಯದಲ್ಲೇ ನಗರದ ಎಲ್ಲ ಶಾಸಕರ ಸಭೆಯನ್ನು ಕರೆದು ಚರ್ಚಿಸಲಿದ್ದೇನೆ ಎಂದರು.

**ರಾಜ್ಯದ ಪದವಿ ಕಾಲೇಜುಗಳಲ್ಲಿ ಬೋಧಕರ ಕೊರತೆಯಿದ್ದು, ಖಾಲಿ ಇರುವ ಹುದ್ದೆ ತುಂಬುವ ಜತೆಗೆ 8,000 ಬೋಧಕ ಹುದ್ದೆಗಳನ್ನು ಹೆಚ್ಚುವರಿಯಾಗಿ ಮಂಜೂರು ಮಾಡುವಂತೆ ಹಾಗೂ ಉನ್ನತ ಇಲಾಖೆಗೆ ರಾಜ್ಯದ ಒಟ್ಟು ಬಜೆಟ್ ಗಾತ್ರದಲ್ಲಿ ಶೇ.3.5 ಮೊತ್ತ ಉನ್ನತ ಶಿಕ್ಷಣಕ್ಕೆ ಮೀಸಲಿಡಬೇಕು ಎಂದು ಮುಖ್ಯಮಂತ್ರಿಯವರಿಗೆ ಮನವಿ ಮಾಡಲಾಗಿದೆ.**

**• ಡಾ.ಸಿ.ಎನ್.ಅಶ್ವತ್ಥನಾರಾಯಣ, ಡಿಸಿಎಂ**

**ಉತ್ತರ ವಿವಿಗೆ ಜಮೀನು:** ಬೆಂಗಳೂರು ಉತ್ತರ ವಿವಿಗೆ ಜಂಗಮಕೋಟೆ ಬಳಿ 172 ಎಕರೆ ಜಾಗ ಗುರುತಿಸಿದ್ದು ಆ ಪೈಕಿ 57 ಎಕರೆಯನ್ನು ಹಸ್ತಾಂತರ ಮಾಡಲಾಗಿದೆ. ಇನ್ನೊಂದು ತಿಂಗಳಲ್ಲಿ 53 ಎಕರೆ ಹಸ್ತಾಂತರ ಮಾಡುವುದಾಗಿ ಜಿಲ್ಲಾಧಿಕಾರಿ ತಿಳಿಸಿದ್ದಾರೆ. ಇದಲ್ಲದೆ 61 ಎಕರೆಯಲ್ಲಿ 51 ಎಕರೆ ಸರ್ಕಾರದ್ದೇ ಇದೆ ಎನ್ನುವುದು ಪರಿಶೀಲನೆ ವೇಳೆ ಗೊತ್ತಾಗಿದೆ. ಅದನ್ನೂ ವಶಕ್ಕೆ ಪಡೆಯಲಾಗುವುದು. ಇನ್ನೊಂದು ತಿಂಗಳಲ್ಲಿ ಎಲ್ಲ ಪ್ರಕ್ರಿಯೆಗಳನ್ನು ಮುಗಿಸಲಾಗುವುದು ಎಂದರು. 2015ರಲ್ಲಿ ಈ ಬೆಂಗಳೂರು ಉತ್ತರ ವಿವಿ ಸ್ಥಾಪನೆ ಬಗ್ಗೆ ಸರ್ಕಾರ ನಿರ್ಧಾರ ಕೈಗೊಂಡಿತಾದರೂ 2018 ರಲ್ಲಿ ಅಸ್ತಿತ್ವಕ್ಕೆ ಬಂದಿದೆ. ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ತಾಲ್ಲೂಕಿನ ಜಂಗಮಕೋಟೆ ಬಳಿ ಸುಸಜ್ಜಿತ ಕ್ಯಾಂಪಸ್ ನಿರ್ಮಾಣವಾಗಲಿದೆ. ಈ ಜಾಗ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ತುಂಬಾ ಹತ್ತಿರದಲ್ಲಿದೆ. ಹೀಗಾಗಿ ಇಲ್ಲಿ ಒಂದು ನಾಲೆಡ್ಜ್ ಸಿಟಿ ಸ್ಥಾಪನೆ ಮಾಡಲಾಗುವುದು ಎಂದು ಹೇಳಿದರು.